**ಪ್ರಧಾನ ವ್ಯವಹಾರ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸೊರಬ**

**ಸಿ ಸಿ ನಂ. 3898/2024**

**ಹೆಸರು :- ಉದಯ**

**ತಂದೆಯ ಹೆಸರು :- ಮಾಲಿಂಗ ಪೂಜಾರಿ**

**ವಯಸ್ಸು :- 52 ವರ್ಷ**

**ಉದ್ಯೋಗ :- ಕೂಲಿ ಕೆಲಸ**

**ಸ್ಥಳ :- ಕೋಣನಕಟ್ಟೆ**

**ದಿನಾಂಕಃ 09.03.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಅಬಕಾರಿ ಅಧಿಕಾರಿಗಳಕೋರಿಕೆಯ ಮೇರೆಗೆ ಸಹಿ ಹಾಕಿರುತ್ತೇನೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿದ್ದು, ಅದು ಪಂಚರಿಗೆ ನೀಡುವ ನೋಟಿಸ್ ಆಗಿದ್ದು, ಸಾಕ್ಷಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದು ಈಗಾಗಲೇ ನಿಪಿ-1 ಎಂದು ಗುರುತಿಸಲ್ಪಟ್ಟಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1 ಬಿ ಎಂದು ಗುರುತಿಸಲಾಯಿತು. ನಾನು ಸದರಿ ಸಹಿಯನ್ನು ಅಬಕಾರಿ ಅಧಿಕಾರಿಗಳ ಕೋರಿಕೆಯ ಮೇರೆಗೆ ಹಾಕಿರುತ್ತೇನೆ. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿದ್ದು, ಅದು ಮುದ್ದೆ ಮಾಲಿನ ಪಟ್ಟಿಯಾಗಿದ್ದು, ಸಾಕ್ಷಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದು ಈಗಾಗಲೇ ನಿಪಿ-4 ಎಂದು ಗುರುತಿಸಲ್ಪಟ್ಟಿದ್ದು, ಸಾಕ್ಷಿಯ ಸಹಿಯನ್ನು ನಿಪಿ-4 ಸಿ ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು

ದಾಖಲೆಯನ್ನು ತೋರಿಸಲಾಗಿದ್ದು, ಅದು ಮಾದರಿ ಮೊಹರಿನ ಚೀಟಿಯಾಗಿದ್ದು, ಸಾಕ್ಷಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದು ಈಗಾಗಲೇ ನಿಪಿ–5 ಎಂದು ಗುರುತಿಸಲ್ಪಟ್ಟಿದ್ದು, ಸಾಕ್ಷಿಯ ಸಹಿಯನ್ನು ನಿಪಿ–5 ಸಿ ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿದ್ದು, ಅದು ಸ್ವತ್ತು ಪಟ್ಟಿಯಾಗಿದ್ದು, ಸಾಕ್ಷಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದು ಈಗಾಗಲೇ ನಿಪಿ–6 ಎಂದು ಗುರುತಿಸಲ್ಪಟ್ಟಿದ್ದು, ಸಾಕ್ಷಿಯ ಸಹಿಯನ್ನು ನಿಪಿ–6 ಸಿ ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿದ್ದು, ಅದು ಘಟನಾ ಸ್ಥಳ ಮತ್ತು ಅಮಾನತ್ತು ಪಂಚನಾಮೆಯಾಗಿದ್ದು, ಸಾಕ್ಷಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದು ಈಗಾಗಲೇ ನಿಪಿ–7 ಎಂದು ಗುರುತಿಸಲ್ಪಟ್ಟಿದ್ದು, ಸಾಕ್ಷಿಯ ಸಹಿಯನ್ನು ನಿಪಿ–7 ಸಿ ಎಂದು ಗುರುತಿಸಲಾಯಿತು. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಸಾಕ್ಷಿಯು ಪಂಚನಾಮೆ ಕಾಲಕ್ಕೆ ತೆಗೆದ ಭಾವಚಿತ್ರವನ್ನು ನೋಡಿ ಗುರುತಿಸಿದ್ದು, ಅದು ಈಗಾಗಲೇ ನಿಪಿ–10 ಎಂದು ಗುರುತಿಸಲ್ಪಟ್ಟಿರುತ್ತದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಅಬಕಾರಿ ಅಧಿಕಾರಿಗಳ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ಆರೋಪಿಯು ನನ್ನ ಪಕ್ಕದ ಗ್ರಾಮದವನಾಗಿರುವುದರಿಂದ ಆತನನ್ನು ನೋಡಿರುತ್ತೇನೆ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯು ಅಭಿಯೋಜನಾ ಪ್ರಕರಣಕ್ಕೆ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿ ಸವಾಲಿಗೆ ಅನುಮತಿ ಕೋರಿದ್ದು, ಸಾಕ್ಷಿಯು ಅಭಿಯೋಜನಾ ಪ್ರಕರಣಕ್ಕೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದ ಕಾರಣ ಪಾಟಿ ಸವಾಲಿಗೆ ಅನುಮತಿ ನೀಡಲಾಯಿತು).**

CC No.3898/2024
CW-3 PW-3

**<u>ಪಾಟಿ ಸವಾಲುಃ ಮಾನ್ಯ ಸ.ಸ.ಅಭಿಯೋಜಕವರಿಂದಃ</u>**

ದಿಃ 24.04.2024 ರಂದು ನನಗೆ ಈಗ ತೋರಿಸಿದ ನಿಪಿ-1 ರಂತೆ ನೋಟಿಸನ್ನು ನೀಡಿರುತ್ತಾರೆ ಅಂದರೆ ಸರಿಯಲ್ಲ. ನನ್ನ ಸಮಕ್ಷಮ ಈಗ ಓದಿ ಹೇಳಿದ ನಿಪಿ-7 ರಂತೆ ಪಂಚನಾಮೆಯನ್ನು ಜರುಗಿಸಿ, ನ್ಯಾಯಾಲಯದ ಮುಂದೆ ಇರುವ ಎಂ.ಓ-1 ನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಅಂದರೆ ಸರಿಯಲ್ಲ. ನನ್ನ ಸಮಕ್ಷಮ ಅಮಾನತ್ತುಪಡಿಸಿಕೊಂಡ ಮುದ್ದೆ ಮಾಲನ್ನು ನಿಪಿ-6 ಸ್ವತ್ತು ಪಟ್ಟಿಯಲ್ಲಿ ನಮೂದಿಸಿ ನನ್ನ ಸಹಿ ಪಡೆದಿರುತ್ತಾರೆ ಅಂದರೆ ಸರಿಯಲ್ಲ. ನನ್ನ ಸಮಕ್ಷಮ ಎಂಓ-1 ಮುದ್ದೆ ಮಾಲನ್ನು ಅಮಾನತ್ತುಪಡಿಸಿಕೊಂಡು ರಾಸಾಯನಿಕ ಪರೀಕ್ಷೆಗಾಗಿ ತೆಗೆದು ಮಾದರಿ ಸೀಲು ಹಾಕಿರುತ್ತಾರೆ ಅಂದರೆ ಸರಿಯಲ್ಲ. ಮಾದರಿ ಸೀಲು ನಿಪಿ-5 ಕ್ಕೆ ನನ್ನ ಸಹಿ ಪಡೆದಿರುತ್ತಾರೆ ಅಂದರೆ ಸರಿಯಲ್ಲ. ನನ್ನ ಸಮಕ್ಷಮ ಅನುಬಂಧ-1 ರ ಪಟ್ಟಿಯನ್ನು ತಯಾರಿಸಿರುತ್ತಾರೆ ಅಂದರೆ ಸರಿಯಲ್ಲ. ನಾನು ಈಗ ನ್ಯಾಯಾಲಯದ ಮುಂದೆ ಇರುವ ಆರೋಪಿಯು ನಮ್ಮ ಪಕ್ಕದ ಗ್ರಾಮದವನಾಗಿರುವುದರಿಂದ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**<u>ಪಾಟಿ ಸವಾಲುಃ</u>** ಆರೋಪಿ ಪರ ವಕೀಲರು ಸಾಕ್ಷಿಯ ಪಾಟಿ ಸವಾಲು ಇಲ್ಲ ಎಂದು ನುಡಿದಿದ್ದು, ಸಾಕ್ಷಿಯ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆ ಇಲ್ಲಃ**

**(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಕಂಪ್ಯೂಟರೀಕರಿಸಲಾಯ್ತು).**

**ಓ.ಹೇ.ಕೇ. ಸರಿ ಇದೆ ಎಂದು ಒಪ್ಪಿದ್ದಾರೆ.**

**ಪ್ರಧಾನ ವ್ಯವಹಾರ ನ್ಯಾ ಮತ್ತು ಜೆ.ಎಂ.ಎಫ್.ಸಿ**

**ಸೊರಬ.**